ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ **:** 03 ನೇ ಫೆಬ್ರುವರಿ, 2021

ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಗೆ ಅನುದಾನ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

242 (383) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಎರಡು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಮಂಜೂರಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಅನುದಾನದಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇದಕ್ಕಾಗಿ ಖರ್ಚಾಗಿರುವ ಹಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೆ ಬೇರೆ ಬೇರೆ ಕಡೆಗಳಲ್ಲಿ ಕೈಗೊಂಡಿರುವ ನಿರ್ದೇಶನಗಳಿವೆಯೇ ; ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?